| | | | |
|---|---|---|---|
| 12. | ಮಸ್‌ಜಿದ್ ನೂರ್ ತರಿದಾಲ್ ಗೌರಿಬಿದನೂರು ತಾ : | 20,000–00 | – |
| 13. | ಆಶೂರ್ ಖಾನ ಮಸೀದಿ ಇಡ್‌ಗೂರ್ ಗ್ರಾಮ ಗೌರಿಬಿದನೂರು ತಾ: 05–06 (ಇಲ್ಲ) | 20,000–00 | – |

39, (118) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ರಾಜ್ಯದಲ್ಲಿ ಭಯೋತ್ಪಾದನೆ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಇತ್ತೀಚೆಗೆ ಬೆಂಗಳೂರಿನಲ್ಲಿ ವಿಜ್ಞಾನಿಗಳ ಮೇಲೆ ನಡೆದ ಭಯೋತ್ಪಾದಕರ ದಾಳಿ ಬಗ್ಗೆ ಸರ್ಕಾರ ಯಾವ ರೀತಿ ತನಿಖೆಯನ್ನು ಆರಂಭಿಸಿದೆ?

ಇ) ಭಯೋತ್ಪಾದನೆಯನ್ನು ತಡೆಗಟ್ಟುವಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳಾವುವು?

ಶ್ರೀ ಹೆಚ್. ಡಿ. ಕುಮಾರಸ್ವಾಮಿ, ಮಾನ್ಯ ಮುಖ್ಯ ಮಂತ್ರಿಗಳು

ಅ) ಕೆಲವು ಭಯೋತ್ಪಾದನೆ ಸಂಘಟನೆಗಳು ರಾಜ್ಯದಲ್ಲಿ ಭಯೋತ್ಪಾದನೆ ಉಂಟು ಮಾಡಲು ಪ್ರಯತ್ನಿಸುತ್ತಿರುವ ಬಗ್ಗೆ ಮಾಹಿತಿಗಳು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) ದಿನಾಂಕ : 28.12.2005ರಂದು ಬೆಂಗಳೂರಿನ ಇಂಡಿಯನ್ ಇನ್ಸ್‌ಟಿಟ್ಯೂಟ್ ಆಫ್ ಸೈನ್ಸ್‌ನ ಕ್ಯಾಂಪಸ್‌ನಲ್ಲಿರುವ ಜೆ.ಎನ್.ಟಾಟಾ ಆಡಿಟೋರಿಯಂ ಬಳಿ ಭಯೋತ್ಪಾದಕರು ನಡೆಸಿರುವ ದಾಳಿಯ ಬಗ್ಗೆ ಸದಾಶಿವನಗರ ಪೊಲೀಸ್ ಠಾಣೆಯಲ್ಲಿ ಮೊಕದ್ದಮ್ಮೆ ಸಂಖ್ಯೆ:110/2005 ಕಲಂ 307–302 ಐಪಿಸಿ 25, 27, 28 ಭಾರತೀಯ ಶಸ್ತ್ರಾಸ್ತ್ರ ಕಾಯ್ದೆ 1969 ಮತ್ತು 4ಮತ್ತು5 ಸ್ಫೋಟಕ ವಸ್ತುಗಳ ಕಾಯ್ದೆ 1908ರ ಪ್ರಕಾರ ಮೊಕದ್ದಮೆಯನ್ನು ದಾಖಲು ಮಾಡಿಕೊಂಡು ತ್ವರಿತ ಗತಿಯಲ್ಲಿ ತನಿಖೆಯನ್ನು ಮಾಡಲಾಗುತ್ತಿದ್ದು, ಸಂಶಯಾತ್ಮಕ ವ್ಯಕ್ತಿಗಳನ್ನು ವಿಚಾರಣೆಗೆ ಗುರಿಪಡಿಸಲಾಗುತ್ತಿದೆ ಹಾಗೂ ಈ ಸಂಬಂಧ ಬಂಧನಗಳನ್ನೂ ಸಹ ಮಾಡಲಾಗುತ್ತಿದೆ.

ಇ) ಕರ್ನಾಟಕ ರಾಜ್ಯದ ನಗರ ಪ್ರದೇಶಗಳಲ್ಲಿ ಹಾಗೂ ಇತರೆಡೆಗಳಲ್ಲಿ ಬುಡಮೇಲು ಕೃತ್ಯ ಎಸಗುವ ಉದ್ದೇಶವುಳ್ಳ ಗುಂಪುಗಳನ್ನು ಗುರುತಿಸುವ ಕಾರ್ಯವನ್ನು ರಾಜ್ಯ ಪೊಲೀಸ್ ಬಲವು ಅಂತಹ ಗುಂಪುಗಳ

ಕಾರ್ಯಚಟುವಟಿಕೆ ಮತ್ತು ವ್ಯಕ್ತಿಗಳ ಮೇಲೆ ನಿಗಾವಹಿಸಿ ಅಗತ್ಯ ಮಾಹಿತಿಗಳನ್ನು ಸಂಗ್ರಹಿಸಿ ಕಾನೂನಿನ ಕ್ರಮ ಕೈಗೊಳ್ಳಲಾಗುತ್ತಿದೆ.

ಗುಪ್ತಚರ ಸಂಸ್ಥೆಗಳ ಮಾಹಿತಿ ಪ್ರಕಾರ ಕೆಲವು ಭಯೋತ್ಪಾದಕ ಸಂಸ್ಥೆಗಳು ಆಡಳಿತ ಯಂತ್ರದ ಕೇಂದ್ರಗಳು, ಪ್ರಾರ್ಥನಾ ಸ್ಥಳಗಳು ಮತ್ತು ಮುಖ್ಯವಾದ ಆರ್ಥಿಕ ಮತ್ತು ರಾಜಕೀಯ ಕೇಂದ್ರಗಳು ಹಾಗೂ ವ್ಯಕ್ತಿಗಳ ಮೇಲೆ ದಾಳಿಮಾಡುವ ಯೋಜನೆ ಹಾಕಿಕೊಂಡಿರುವ ಬಗ್ಗೆ ಮಾಹಿತಿಗಳು ಲಭ್ಯವಾಗುತ್ತಿದ್ದು, ಅಂತಹ ಮಾಹಿತಿಗಳನ್ನು ಸಂಬಂಧಪಟ್ಟ ಅಧಿಕಾರಿಗಳಿಗೆ ನೀಡುವುದರ ಮೂಲಕ ನಿಯಂತ್ರಣ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ. ಈಗಾಗಲೇ ಭದ್ರತೆಯನ್ನು ನೀಡಲಾಗಿರುವ ಸ್ಥಳಗಳಲ್ಲಿ ಹೆಚ್ಚಿನ ಭದ್ರತಾ ವ್ಯವಸ್ಥೆಮಾಡಲಾಗಿದೆ. ವಿವಿಧ ಸಾರ್ವಜನಿಕ ಉದ್ದಿಮೆಗಳ ಸಂಸ್ಥೆಗಳೊಂದಿಗೆ ಸಭೆಗಳನ್ನು ನಡೆಸಿ ಭದ್ರತಾ ವ್ಯವಸ್ಥೆಯನ್ನು ಪರಿಶೀಲಿಸಲಾಗುತ್ತಿದೆ.

ರಾಜ್ಯದಲ್ಲಿ ಮಾನ್ಯ ಮುಖ್ಯಮಂತ್ರಿಗಳು ಭದ್ರತಾ ವ್ಯವಸ್ಥೆಯ ಬಗ್ಗೆ ಉನ್ನತ ಅಧಿಕಾರಿಗಳ ಸಭೆಯನ್ನು ಆಗಿಂದಾಗ್ಗೆ ಕರೆದು ಪರಿಶೀಲನೆ ಮಾಡುತ್ತಿರುತ್ತಾರೆ. ಸ್ಥಳೀಯ ಅಧಿಕಾರಿಗಳನ್ನು ಸನ್ನದ್ಧರಾಗಿಡಲು ನಿರ್ದೇಶಿಸಲಾಗಿದೆ. ಭದ್ರತಾ ವ್ಯೂಹವನ್ನು ಹೆಚ್ಚಿಸಲಾಗಿದೆ. ರಾಜ್ಯ ಗುಪ್ತವಾರ್ತೆಯು ಕೇಂದ್ರದ ಗುಪ್ತಚರ ಸಂಸ್ಥೆಗಳು ಮತ್ತು ಇತರೆ ರಾಜ್ಯಗಳ ಸಂಸ್ಥೆಗಳೊಂದಿಗೆ ನಿರಂತರ ಸಂಪರ್ಕವನ್ನು ಇಟ್ಟುಕೊಳ್ಳಲು ಸರ್ಕಾರವು ನಿರ್ದೇಶಿಸಿದ್ದು, ಪರಿಸ್ಥಿತಿಯನ್ನು ಗಂಭೀರವಾಗಿ ಅವಲೋಕಿಸಲಾಗುತ್ತಿದೆ.

40, (119) ಶ್ರೀ ವಾಟಾಳ್ ನಾಗರಾಜ್ (ಚಾಮರಾಜ ನಗರ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಸುವರ್ಣ ಕರ್ನಾಟಕ ವರ್ಷದಲ್ಲಿ ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮಗಳಾವುವು?

ಆ) ಸುವರ್ಣ ಕರ್ನಾಟಕ ವರ್ಷವನ್ನು ಯಾವ ರೀತಿಯಲ್ಲಿ ಆಚರಣೆ ಮಾಡಲು ಸರ್ಕಾರ ತೀರ್ಮಾನಿಸಿದೆ.

ಶ್ರೀ ಹೆಚ್. ಡಿ. ಕುಮಾರಸ್ವಾಮಿ, ಮಾನ್ಯ ಮುಖ್ಯ ಮಂತ್ರಿಗಳು

ಅ) ವಿವರಗಳನ್ನು ಅನುಬಂಧದಲ್ಲಿ ನೀಡಿದೆ.

ಆ) ಕರ್ನಾಟಕವು ಏಕೀಕರಣಗೊಂಡು 2006ರ ನವೆಂಬರ್‌ಗೆ 50 ವರ್ಷಗಳು ತುಂಬುತ್ತಿವೆ. 2006ರ ನವೆಂಬರ್‌ನಲ್ಲಿ ಪ್ರಾರಂಭಗೊಂಡು 2007ರ ನವೆಂಬರ್ ವರೆಗೆ ಅರ್ಥಪೂರ್ಣವಾಗಿ ಪರಿಣಾಮಕಾರಿಯಾಗಿ ಶಾಶ್ವತ ಕಾರ್ಯಕ್ರಮಗಳನ್ನು ಸರ್ಕಾರದ ಎಲ್ಲಾ ಇಲಾಖೆಗಳೂ ರೂಪಿಸಿ ಆಚರಿಸ ಬೇಕೆಂದು ಉದ್ದೇಶಿಸಲಾಗಿದೆ. ಇದೇ ಸಂದರ್ಭದಲ್ಲಿ ವಿಶ್ವ ಕನ್ನಡ ಸಮ್ಮೇಳನ ನಡೆಸುವುದರ ಜೊತೆಗೆ ಸುವರ್ಣ ಸಂಸ್ಕೃತಿ ಸಮುಚ್ಚಯ, ಶ್ರೇಷ್ಠ ಗ್ರಂಥಗಳ /